ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ ರಾಣೇಬೆನ್ನೂರು.

ಸಿ.ಸಿ.ಸಂಖ್ಯೆ: 300/2026

ಪಿ ಡಬ್ಲ್ಯೂ:2

ಸಿ ಡಬ್ಲ್ಯೂ: 4

| | | |
|---|---|---|
| ಸಾಕ್ಷಿಯ ಹೆಸರು | : | ವಿಜಯಲಕ್ಷ್ಮಿ |
| ಗಂಡನ ಹೆಸರು | : | ರಾಜೀವ |
| ವಯಸ್ಸು | : | 37 |
| ಉದ್ಯೋಗ | : | ಮನೆಕೆಲಸ |
| ವಾಸಸ್ಥಳ | : | ಅಂತರವಳ್ಳಿ |

ದಿನಾಂಕ: 11.08.2026 ರಂದು ಸಾಕ್ಷಿಯನ್ನು ಕರೆಯಿಸಿ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ. ರವರಿಂದ:**

ಆರೋಪಿಯು ನನ್ನ ಗಂಡನಾಗಬೇಕು. ದಿನಾಂಕ ನೆನಪಿಲ್ಲ. ನಾನು ಮತ್ತು ಆರೋಪಿ ತನ್ನ ಮೊಟರ್ ಸೈಕಲ್ ನಲ್ಲಿ ತಿರುಮಲದೇವರಕೊಪ್ಪ ದಿಂದ ರಾಣೆಬೆನ್ನೂರಿಗೆ ಹೊಗುತ್ತಿದ್ದಾಗ ಅಪಘಾತವಾಗಿರುತ್ತದೆ. ಸದರಿ ಅಪಘಾತವು ಹೇಗೆ ಆಗಿರುತ್ತದೆ ಎಂದು ನನಗೆ ನೆನಪಿಲ್ಲ. ಅಪಘಾತದ ಸಮಯ ನನಗೆ ನೆನಪಿಲ್ಲ. ನಾನು ಪೋಲಿಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

**ಮಾನ್ಯ ಸಸಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು**

**ಪಾಟೀ ಸವಾಲು: ಮಾನ್ಯ ಸ.ಸ.ಅ. ರವರಿಂದ:**

ದಿನಾಂಕ:15.01.2026 ರಂದು ಸಂಜೆ 6.45 ರ ಸುಮಾರಿಗೆ ಆರೋಪಿಯು ತನ್ನ ಮೋಟರ್ ಸೈಕಲ್ ನಂ ಕೆ ಎ 27/ವೈ 5760 ರನ್ನು ಅತೀವೇಗವಾಗಿ ಮತ್ತು ಅಜಾಗರುಕತೆಯಿಂದ ಚಾಲನೆ ಮಾಡಿಕೊಂಡು ಬಂದು ಮೃತನಿಗೆ ಅಪಘಾತ ಪಡಿಸಿ ತೀವ್ರ ಸ್ವರೂಪದ ಗಾಯಗಳಾಗಿದ್ದು ನಂತರ ಆಸ್ಪತ್ರೆಗೆ ಕೆರೆದುಕೊಂಡು ಹೋಗುವಾಗ ಮೃತ ಹೊಂದಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಆರೋಪಿಯ ಮೊಟರ್ ಸೈಕಲ್ ನ ಹಿಂಬಾಗ

ನಾನು ಕುಳತಿದ್ದು ಅಪಘಾತವನ್ನು ನೋಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಅಪಘಾತದಿಂದ ನಮಗೂ ಸಹ ಗಾಯಗಳಾಗಿರುತ್ತವೆ ಎಂದರೆ ಸರಿಯಲ್ಲ. ಅಪಘಾತವು ಆರೋಪಿಯ ತಪ್ಪಿನಿಂದ ಆಗಿರುತ್ತದೆ ಎಂದರೆ ಸರಿಯಲ್ಲ. ದಿನಾಂಕ 16.01.2026 ರಂದು ಪೋಲಿಸರ ಮುಂದೆ ನಾನು ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ಹೇಳಿಕೆಯ ಪೂರ್ಣ ಬಾಗವನ್ನು ಓದಿ ಹೇಳಿದ್ದು ಸಾಕ್ಷಿಯು ಅಲ್ಲಗಳೆದ ಕಾರಣ ಸದರಿ ಹೇಳಿಕೆಯ ಪೂರ್ಣಭಾಗವನ್ನು ನಿಪಿ 2 ಎಂದು ಗುರುತಿಸಲಾಯಿತು. ನಾನು ಆರೋಪಿಗೆ ಅನುಕೂಲವಾಗಲಿ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿ ಪರ ಪಾಟೀ ಸವಾಲು ಇಲ್ಲ.**

ಮರು ವಿಚಾರಣೆ ಇಲ್ಲ.

ತೆ.ನ್ಯಾದಲ್ಲಿ ಬೆ.ಮಾಡಲಾಯಿತು. ನನ್ನ ಸಮಕ್ಷಮ

Sd/-

ಓ ಹೇ ಕೆ ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು,
ರಾಣೇಬೆನ್ನೂರು.

ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ ರಾಣೇಬೆನ್ನೂರು.
ಸಿ.ಸಿ.ಸಂಖ್ಯೆ: 300/2026

ಪಿ ಡಬ್ಲ್ಯೂ: 3
ಸಿ ಡಬ್ಲ್ಯೂ: 5

| | | |
|---|---|---|
| ಸಾಕ್ಷಿಯ ಹೆಸರು | : | ಶಾಮ್ |
| ಗಂಡನ ಹೆಸರು | : | ಈರಪ್ಪ |
| ವಯಸ್ಸು | : | 45 |
| ಉದ್ಯೋಗ | : | ಕೂಲಿ ಕೆಲಸ |
| ವಾಸಸ್ಥಳ | : | ಗಂಗಾಜಲ ತಾಂಡಾ |

ದಿನಾಂಕಃ 11.08.2026 ರಂದು ಸಾಕ್ಷಿಯನ್ನು ಕರೆಯಿಸಿ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ**

ನಾನು ಈ ಪ್ರಕರಣದ ಕುರಿತು ಯಾವುದೇ ಅಪಘಾತವನ್ನು ನೋಡಿರುವುದಿಲ್ಲ ಹಾಗೂ ಯಾರ ತಪ್ಪಿನಿಂದ ಅಪಘಾತವಾಗಿರುತ್ತದೆ ಎಂದು ನನಗೆ ಗೊತ್ತಿಲ್ಲ. ಅಪಘಾತದ ಕುರಿತು ನಾನು ಪೋಲಿಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ. ದಿನಾಂಕ ನೆನಪಿಲ್ಲ. ಆದರೆ ಪೋಲಿಸರು ಒಂದು ದಿನ ನಾನು ರಸ್ತೆಯಲ್ಲಿ ಬರುತ್ತಿದ್ದಾಗ ಪೋಲಿಸರು ನನ್ನನ್ನು ನಿಲ್ಲಿಸಿ ಸಹಿ ಪಡೆದು ಪೋಟೋ ತೆಗೆದುಕೊಂಡಿರುತ್ತಾರೆ. ಸಾಕ್ಷಿಯು ಗುನ್ಹಾ ಜಾಗದ ಪಂಚನಾಮೆ ಮತ್ತು ಜಪ್ತಿ ಪಂಚನಾಮೆಯಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದು, ಸದರಿ ಪಂಚನಾಮೆಗಳನ್ನು **ನಿಪಿ 3 ಮತ್ತು 4** ಮತ್ತು ಸಾಕ್ಷಿಯ ಸಹಿಗಳನ್ನು **ನಿಪಿ 3 ಎ ಮತ್ತು 4 ಎ** ಎಂದು ಗುರುತಿಸಲಾಯಿತು. ಸದರಿ ಪಂಚನಾಮೆಯ ಕಾಲಕ್ಕೆ ಯಾರು ಇದ್ದರೂ ಎಂದು ನನಗೆ ಗೊತ್ತಿಲ್ಲ.

**ಮಾನ್ಯ ಸಸಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು**

**ಪಾಟೀ ಸವಾಲುಃ ಮಾನ್ಯ ಸ.ಸ.ಅ. ರವರಿಂದಃ**

ದಿನಾಂಕಃ15.01.2026 ರಂದು ಸಂಜೆ 6.45 ರ ಸುಮಾರಿಗೆ ಆರೋಪಿಯು ತನ್ನ

ಮೋಟರ್ ಸೈಕಲ್ ನಂ ಕೆ ಎ 27/ವೈ 5760 ರನ್ನು ಅತೀವೇಗವಾಗಿ ಮತ್ತು ಅಜಾಗರುಕತೆಯಿಂದ ಚಾಲನೆ ಮಾಡಿಕೊಂಡು ಬಂದು ಮೃತನಿಗೆ ಅಪಘಾತ ಪಡಿಸಿ ತೀವ್ರ ಸ್ವರೂಪದ ಗಾಯಗಳಾಗಿದ್ದು ನಂತರ ಆಸ್ಪತ್ರೆಗೆ ಕೆರೆದುಕೊಂಡು ಹೋಗುವಾಗ ಮೃತ ಹೊಂದಿರುತ್ತಾರೆ ಎಂದರೆ  ನನಗೆ ಗೊತ್ತಿಲ್ಲ.  ನಾನು ಸದರಿ ಅಪಘಾತವನ್ನು ನೋಡಿದ್ದು ಆರೋಪಿಯ ತಪ್ಪಿನಿಂದ ಆಗಿರುತ್ತದೆ ಎಂದರೆ ಸರಿಯಲ್ಲ. ದಿನಾಂಕ 16.01.2026 ರಂದು ಪೋಲಿಸರ ಮುಂದೆ ನಾನು ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ಹೇಳಿಕೆಯ ಪೂರ್ಣ ಬಾಗವನ್ನು ಓದಿ ಹೇಳಿದ್ದು ಸಾಕ್ಷಿಯು ಅಲ್ಲಗಳೆದ ಕಾರಣ ಸದರಿ ಹೇಳಿಕೆಯ ಪೂರ್ಣಭಾಗವನ್ನು **ನಿಪಿ 5** ಎಂದು ಗುರುತಿಸಲಾಯಿತು. ನಿಪಿ 3 ಮತ್ತು 4 ರ ಪಂಚನಾಮೆಯನ್ನು ನನ್ನ ಮತ್ತು ಚಾಸ 2 ಮತ್ತು 3 ರ ಸಮಕ್ಷಮ ತಯಾರಿಸಲಾಗಿದೆ ಎಂದರೆ ಸರಿಯಲ್ಲ.  ನಾನು ಆರೋಪಿಗೆ ಅನುಕೂಲವಾಗಲಿ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿ ಪರ ಪಾಟೀ ಸವಾಲು ಇಲ್ಲ.**

ಮರು ವಿಚಾರಣೆ ಇಲ್ಲ.

ತೆ.ನ್ಯಾದಲ್ಲಿ ಬೆ.ಮಾಡಲಾಯಿತು.

ನನ್ನ ಸಮಕ್ಷಮ

Sd/-

ಓ ಹೇ ಕೆ ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು,
ರಾಣೇಬೆನ್ನೂರು.

ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ ರಾಣೇಬೆನ್ನೂರು.
ಸಿ.ಸಿ.ಸಂಖ್ಯೆ 300/2026

ಪಿ ಡಬ್ಲ್ಯೂ 4
ಸಿ ಡಬ್ಲ್ಯೂ 6

| | | |
|---|---|---|
| ಸಾಕ್ಷಿಯ ಹೆಸರು | : | ದಿಳ್ಳೇಪ್ಪ |
| ಗಂಡನ ಹೆಸರು | : | ಬಸಪ್ಪ |
| ವಯಸ್ಸು | : | 43 |
| ಉದ್ಯೋಗ | : | ಚಾಲಕ |
| ವಾಸಸ್ಥಳ | : | ರಾಣೆಬೆನ್ನೂರು |

ದಿನಾಂಕಃ 11.08.2026 ರಂದು ಸಾಕ್ಷಿಯನ್ನು ಕರೆಯಿಸಿ ಸತ್ಯ ಪ್ರತಿಜ್ಞೆ ಬೋದಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ**

ನಾನು ಈ ಪ್ರಕರಣದ ಕುರಿತು ಯಾವುದೇ ಅಪಘಾತವನ್ನು ನೋಡಿರುವುದಿಲ್ಲ ಹಾಗೂ ಯಾರ ತಪ್ಪಿನಿಂದ ಅಪಘಾತವಾಗಿರುತ್ತದೆ ಎಂದು ನನಗೆ ಗೊತ್ತಿಲ್ಲ. ಅಪಘಾತದ ಕುರಿತು ನಾನು ಪೋಲಿಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

**ಮಾನ್ಯ ಸಸಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು**

**ಪಾಟೀ ಸವಾಲುಃ ಮಾನ್ಯ ಸ.ಸ.ಅ. ರವರಿಂದಃ**

ದಿನಾಂಕಃ15.01.2026 ರಂದು ಸಂಜೆ 6.45 ರ ಸುಮಾರಿಗೆ ಆರೋಪಿಯು ತನ್ನ ಮೋಟರ್ ಸೈಕಲ್ ನಂ ಕೆ ಎ 27/ವೈ 5760 ರನ್ನು ಅತೀವೇಗವಾಗಿ ಮತ್ತು ಅಜಾಗರುಕತೆಯಿಂದ ಚಾಲನೆ ಮಾಡಿಕೊಂಡು ಬಂದು ಮೃತನಿಗೆ ಅಪಘಾತ ಪಡಿಸಿ ತೀವ್ರ ಸ್ವರೂಪದ ಗಾಯಗಳಾಗಿದ್ದು ನಂತರ ಆಸ್ಪತ್ರೆಗೆ ಕೆರೆದುಕೊಂಡು ಹೋಗುವಾಗ ಮೃತ ಹೊಂದಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ನಾನು ಸದರಿ ಅಪಘಾತವನ್ನು ನೋಡಿದ್ದು ಆರೋಪಿಯ ತಪ್ಪಿನಿಂದ ಆಗಿರುತ್ತದೆ ಎಂದರೆ ಸರಿಯಲ್ಲ. ದಿನಾಂಕ 16.01.2026 ರಂದು

ಪೋಲಿಸರ ಮುಂದೆ ನಾನು ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ಹೇಳಿಕೆಯ ಪೂರ್ಣ ಬಾಗವನ್ನು ಓದಿ ಹೇಳಿದ್ದು ಸಾಕ್ಷಿಯು ಅಲ್ಲಗಳೆದ ಕಾರಣ ಸದರಿ ಹೇಳಿಕೆಯ ಪೂರ್ಣಭಾಗವನ್ನು **ನಿಪಿ 6** ಎಂದು ಗುರುತಿಸಲಾಯಿತು. ನಾನು ಆರೋಪಿಗೆ ಅನುಕೂಲವಾಗಲಿ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿ ಪರ ಪಾಟೀ ಸವಾಲು ಇಲ್ಲ.**

ಮರು ವಿಚಾರಣೆ ಇಲ್ಲ.

ತೆ.ನ್ಯಾದಲ್ಲಿ ಬೆ.ಮಾಡಲಾಯಿತು.

ನನ್ನ ಸಮಕ್ಷಮ

Sd/-

ಓ ಹೇ ಕೆ ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು,
ರಾಣೇಬೆನ್ನೂರು.